ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/112/ಬ್ಯಾಕ್‌ಲಾಗ್/ನೇ.ವಿ/2011-12

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 14.06.2019

ಇವರಿಗೆ,

ಜಂಟಿ ನಿರ್ದೇಶಕರು,
ಪ್ರಾದೇಶಿಕ ಕಛೇರಿ,
ಕಾಲೇಜು ಶಿಕ್ಷಣ ಇಲಾಖೆ,
ಬೆಂಗಳೂರು, ಮೈಸೂರು, ಮಂಗಳೂರು,
ಧಾರವಾಡ, ಶಿವಮೊಗ್ಗ ಮತ್ತು ಕಲಬುರಗಿ.

ಮಾನ್ಯರೆ,

ವಿಷಯ: ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಗುರುತಿಸಲಾಗಿರುವ ಬೋಧಕ ಮತ್ತು ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಪತ್ರ ಸಂಖ್ಯೆ:ಇಡಿ/164/ಯುಪಿಸಿ/2010, ದಿನಾಂಕ:04.01.2011
2. ಈ ಕಛೇರಿಯ ಸುತ್ತೋಲೆ ಸಂಖ್ಯೆ :ಡಿಸಿಇ :90:ಇಪಿಆರ್ ( ಖಾಕಾವಿ-3) ಪಾಲಿಸಿ:1992, ದಿನಾಂಕ:10.02.2011

** ** **

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಇಲಾಖಾ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಗುರುತಿಸಲಾಗಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಕೂಡಲೇ ಕ್ರಮ ತೆಗೆದುಕೊಳ್ಳುವಂತೆ ಈಗಾಗಲೇ ಈ ಕಛೇರಿಯ ಪತ್ರಗಳಲ್ಲಿ ಹಲವು ಬಾರಿ ತಮಗೆ ತಿಳಿಸಲಾಗಿದೆ. ಆದರೆ, ಕೆಲವು ಆಡಳಿತ ಮಂಡಳಿಗಳು ಅವರ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಕೆಲವೊಂದು ವಿಷಯಗಳಿಗೆ ನಿಗಧಿತ ಕಾರ್ಯಭಾರ ಇದ್ದರೂ ಮಂಜೂರಾದ ಖಾಲಿ ಹುದ್ದೆ ಇರುವುದಿಲ್ಲವೆಂದು ಹಾಗೂ ಕೆಲವು ವಿಷಯಗಳಲ್ಲಿ ಮಂಜೂರಾದ ಖಾಲಿ ಹುದ್ದೆ ಇದ್ದರೂ, ಸದರಿ ಹುದ್ದೆಗಳಿಗೆ ನಿಗಧಿತ ಕಾರ್ಯಭಾರ ಇಲ್ಲದ ಕಾರಣ ಬೋಧಕರ ಬ್ಯಾಕ್‌ಲಾಗ್ ಹುದ್ದೆಗಳನ್ನು ಸಂಪೂರ್ಣವಾಗಿ ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ ಎಂದು ತಿಳಿಸಿರುತ್ತೀರಿ.

ಆದರೆ, ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿ ಬ್ಯಾಕ್‌ಲಾಗ್ ಹುದ್ದೆಗಳೆಂದು ಗುರುತಿಸಿರುವ ವಿಷಯಗಳಿಗೆ ಅಗತ್ಯ ಕಾರ್ಯಭಾರ ಇಲ್ಲದಿದ್ದಲ್ಲಿ, ಅಂತಹ ವಿಷಯಗಳ ಖಾಲಿ ಹುದ್ದೆಗಳನ್ನು ಕಾರ್ಯಭಾರ ಇರುವ ಅನುದಾನಿತ ವಿಷಯಗಳಿಗೆ ಹುದ್ದೆ ಪರಿವರ್ತನೆ ಮಾಡಿ ಭರ್ತಿ ಮಾಡಲು ಸರ್ಕಾರದ ಸಹಮತಿ ಇರುತ್ತದೆಂದು ನಿರ್ದೇಶಿಸಲಾಗಿರುತ್ತದೆ(ಪ್ರತಿ ಲಗತ್ತಿಸಿದೆ).

ಈ ಸಂಬಂಧ ಉಲ್ಲೇಖ(2)ರ ಈ ಕಛೇರಿಯ ಸುತ್ತೋಲೆಯಲ್ಲಿ ಕಾರ್ಯಭಾರ ಇಲ್ಲದಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಕಾರ್ಯಭಾರವಿರುವ ಹುದ್ದೆಗಳಿಗೆ ವಿಷಯ ಪರಿವರ್ತನೆ ಮಾಡಿ, ಭರ್ತಿ ಮಾಡಲು ಕ್ರೋಢೀಕೃತ ವರದಿಯನ್ನು ನೀಡಲು ಸೂಚಿಸಲಾಗಿತ್ತು. ಪ್ರಸ್ತುತ ಬ್ಯಾಕ್‌ಲಾಗ್ ಹುದ್ದೆಗಳನ್ನು ಆದ್ಯತೆಯ ಮೇರೆಗೆ ಭರ್ತಿ ಮಾಡಲು ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ/ ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು ಶಿಫಾರಸ್ಸು ಮಾಡಿದ್ದು, ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದನ್ನು ಸಚಿವ ಸಂಪುಟದ ಉಪಸಮಿತಿಯು ಗಂಭೀರವಾಗಿ ಪರಿಗಣಿಸಿ, ಸಂಬಂಧಪಟ್ಟವರ ಮೇಲೆ ನಿಯಮಾನುಸಾರ ಕಠಿಣ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿರುತ್ತದೆ.

ಆದ್ದರಿಂದ, ಮೇಲ್ಕಂಡ ಸದರಿ ಸುತ್ತೋಲೆಯನ್ನು ಮತ್ತೊಮ್ಮೆ ತಮ್ಮ ಗಮನಕ್ಕೆ ತುರುತ್ತಾ, ಕಾರ್ಯಭಾರ ಇಲ್ಲದಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಕಾರ್ಯಭಾರವಿರುವ ವಿಷಯಗಳಿಗೆ ಹುದ್ದೆ ಪರಿವರ್ತನೆ ಮಾಡಿ ಕೂಡಲೇ ಭರ್ತಿ ಮಾಡಲು ಸೂಕ್ತ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿದೆ. ಒಂದು ವೇಳೆ ಈ ಬಗ್ಗೆ ಆಡಳಿತ ಮಂಡಳಿಯು ಅಗತ್ಯ ಕ್ರಮ ತೆಗೆದುಕೊಳ್ಳದಿದ್ದಲ್ಲಿ ಖಾಲಿ ಹುದ್ದೆ ಭರ್ತಿ ಮಾಡಲು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ ಸಂದರ್ಭದಲ್ಲಿ ಇಲಾಖೆಯ ಹಂತದಲ್ಲೇ ವಿಷಯ ಪರಿವರ್ತನೆ ಮಾಡಿ ಬ್ಯಾಕ್‌ಲಾಗ್ ಹುದ್ದೆ ಭರ್ತಿ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ತಮ್ಮ ವಿಶ್ವಾಸಿ

ಕಾಲೇಜು ಶಿಕ್ಷಣ ಆಯುಕ್ತರು

**ಪ್ರತಿಯನ್ನು:**

1. ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಆಡಳಿತ ಮಂಡಳಿ/ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು–ಈ ಪತ್ರವನ್ನು ಕೂಡಲೇ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.
3. ಕಛೇರಿ ಪ್ರತಿ.